೪೯೬ ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಿಲಾದ ವಿಷಯ

ವಿಷಯ : ಕುಷ್ಟಗಿಯಲ್ಲಿ ನಡೆದ ಸಾಮೂಹಿಕ ಅತ್ಯಾಚಾರ.

* ಶ್ರೀ ಬಿ. ಎಸ್. ಯಡಿಯೂರಪ್ಪ : ಮಾನ್ಯ ಅಧ್ಯಕ್ಷರೇ, ಕುಷ್ಟಗಿಯಲ್ಲಿ ನಡೆದಂತಹ ಸಾಮೂಹಿಕ ಅತ್ಯಾಚಾರದ ಬಗ್ಗೆ ಸರ್ಕಾರದವರು ಸರಿಯಾದಂತಹ ಕ್ರಮವನ್ನು ತೆಗೆದುಕೊಳ್ಳಬೇಕೆಂದು ಒತ್ತಾಯಿಸುತ್ತೇನೆ. ಮೊನ್ನೆ ಶಾಂತಿಯುತವಾದಂತಹ ಬಂದ್ ನಡೆದಂತಹ ಸಂದರ್ಭದಲ್ಲಿಯೂ ಪೋಲೀಸ್‌ನವರೆ ಶಾಂತಿಯುತವಾದಂತಹ ಜನರಿಗೆ ಹಲ್ಲೆಯನ್ನು ಮಾಡಿದ್ದಾರೆ. ಇದುವರೆವಿಗೂ 4 ಜನ ಅಪರಾಧಿಗಳನ್ನು ಬಂಧಿಸಿಲ್ಲ. ಕೆ.ಎಂ.ಸಿ.ಯಲ್ಲಿ ಆಗಿರುವುದು ಸಂಯುಕ್ತ ಕರ್ನಾಟಕದ ಪತ್ರಿಕೆಯಲ್ಲಿ ವರದಿ ಬಂದಿದೆ. ಪೋಲೀಸಿನವರು ಇದಕ್ಕೆ ಶಾಮೀಲಾಗಿದ್ದಾರೆ. ಸರ್ಕಲ್ ಇನ್ಸ್‌ಪೆಕ್ಟರ್ ಯಾರನ್ನೂ ಅರೆಸ್ಟ್ ಮಾಡಿಲ್ಲ. ಅಲ್ಲಿರುವಂತಹ 4 ಜನ ಅಪರಾಧಿಗಳನ್ನು ಅರೆಸ್ಟ್ ಮಾಡಿಲ್ಲ. ಇದನ್ನು ನಾವು ಪ್ರತಿಭಟನೆ ಮಾಡಿ ನಮ್ಮ ಧರಣಿಯನ್ನು ಮುಂದುವರಿಸುತ್ತಿದ್ದೇವೆ. ತಾವು ಹೇಗೆ ಮಾಡುತ್ತೀರೋ, ಸರ್ಕಾರಕ್ಕೆ ಇದರ ಬಗ್ಗೆ ಯಾವ ರೀತಿ ಛೀಮಾರಿ ಮಾಡುತ್ತೀರೋ ಅದು ನಿಮಗೆ ಬಿಟ್ಟಿದ್ದುದು.

* ಶ್ರೀ ಪಿ .ಜಿ. ಆರ್. ಸಿಂಧ್ಯ : ಮಾನ್ಯ ಅಧ್ಯಕ್ಷರೇ, ಈ ಬಗ್ಗೆ ನಾವು ಕೆಲವು ವಿಚಾರಗಳನ್ನು ಹೇಳುವುದು ಇದೆ. ತಮ್ಮ ಜೊತೆಯಲ್ಲಿ ನಾವು ಈಗಾಗಲೇ ಸಮಾಲೋಚನೆಯನ್ನು ಮಾಡಿದ್ದೇವೆ. ಪ್ರಶ್ನೋತ್ತರ ವೇಳೆಯ ನಂತರ ತಾವು ಇದಕ್ಕೆ ಅವಕಾಶವನ್ನು ಮಾಡಿಕೊಡಬೇಕೆಂದು ನಿಮ್ಮಲ್ಲಿ ನಾನು ವಿನಂತಿಮಾಡಿಕೊಳ್ಳುತ್ತೇನೆ.

ಅಧ್ಯಕ್ಷರು : ಮಾನ್ಯ ಯಡಿಯೂರಪ್ಪನವರೇ ನಿಮಗೆ ಪ್ರಶ್ನೋತ್ತರ ಕಾಲ ಮುಗಿದ ನಂತರ ಅವಕಾಶವನ್ನು ಮಾಡಿಕೊಡುತ್ತೇನೆ. ತಾವು ದಯವಿಟ್ಟು ತಮ್ಮ ತಮ್ಮ ಸ್ಥಳಗಳಿಗೆ ಹೋಗಿ, ಪ್ರಶ್ನೋತ್ತರ ವೇಳೆಯನ್ನು ನಡೆಸಲು ಆಸ್ಪದ ಮಾಡಿಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

(ಮಾನ್ಯ ಅಧ್ಯಕ್ಷರ ಮನವಿಯ ಮೇರೆಗೆ ಧರಣಿ ಕುಳಿತಿದ್ದ ಮಾನ್ಯ ಸದಸ್ಯರು ತಮ್ಮ ಸ್ಥಾನಗಳಿಗೆ ತೆರಳಿದರು.)

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಬಾಯಿಮಾತಿನ ಮೂಲಕ ನೀಡಲಾದ ಉತ್ತರಗಳು.

ವಿಷಯ : ವಿದ್ಯುಚ್ಛಕ್ತಿ ಮಂಡಳಿಯ ಕಾರ್ಯ ಮತ್ತು ಘಟಕಗಳಿಗೆ ಸೌಲಭ್ಯ.

Q : 1447

ಶ್ರೀ ಎಂ. ಮುನಿಸ್ವಾಮಿ (ಶಾಂತಿನಗರ) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?